# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 55 |
| ಸದಸ್ಯರ ಹೆಸರು | : | ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; ಇದರಲ್ಲಿ ಯುಜಿಸಿ ನಿಗದಿಪಡಿಸಿರುವ ಅರ್ಹತೆ ಇರುವ ಹಾಗೂ ಇಲ್ಲದವರ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ:440<br><br>ಈ ಹಿಂದಿನ 2023-24ನೇ ಶೈಕ್ಷಣಿಕ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನೇ ಪ್ರಸ್ತುತ 2024-25ನೇ ಸಾಲಿಗೆ ತಾತ್ಕಾಲಿಕವಾಗಿ ಮುಂದುವರಿಸಿದ್ದು, ಅದರಂತೆ ಅತಿಥಿ ಉಪನ್ಯಾಸಕರ ಸಂಖ್ಯೆ:10976.<br><br>ಇದರಲ್ಲಿ ಯು.ಜಿ.ಸಿ. ನಿಗದಿಪಡಿಸಿರುವ ವಿದ್ಯಾರ್ಹತೆ ಇರುವ ಅತಿಥಿ ಉಪನ್ಯಾಸಕರ ಸಂಖ್ಯೆ:5623 ಹಾಗೂ ಯು.ಜಿ.ಸಿ. ನಿಗದಿಪಡಿಸಿರುವ ವಿದ್ಯಾರ್ಹತೆ ಇಲ್ಲದಿರುವ ಅತಿಥಿ ಉಪನ್ಯಾಸಕರ ಸಂಖ್ಯೆ: 5353.</td></tr>
<tr><td>ಆ)</td><td>ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಅರ್ಹತೆ ವಿಷಯದಲ್ಲಿ ಯುಜಿಸಿ ನಿಗದಿಪಡಿಸಿರುವ ಮಾನದಂಡಗಳನ್ನು ಅನುಸರಿಸುವ ಕುರಿತು ಸರ್ಕಾರದ ನಿಲುವೇನು;</td><td rowspan="2">ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ರ ಕಂಡಿಕೆ (6) ರಲ್ಲಿ "ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 3 ವರ್ಷಗಳ ಕಾಲಾವಕಾಶ ನೀಡಲಾಗಿರುತ್ತದೆ. 3 ವರ್ಷಗಳ ನಂತರ ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು" ಎಂಬುದಾಗಿ ಆದೇಶಿಸಲಾಗಿರುತ್ತದೆ.<br><br>ಅಲ್ಲದೆ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿ ಸಂಖ್ಯೆ:23600/2023 ಕ್ಕೆ ಮಾನ್ಯ ನ್ಯಾಯಾಲಯವು ದಿನಾಂಕ:05.09.2024 ರಂದು ತೀರ್ಪು ನೀಡಿ, ಅತಿಥಿ ಉಪನ್ಯಾಸಕರ ಆಯ್ಕೆಗೆ ಯು.ಜಿ.ಸಿ. ವಿದ್ಯಾರ್ಹತೆ (ಎನ್ಇಟಿ / ಎಸ್ಎಲ್ಇಟಿ / ಪಿಹೆಚ್.ಡಿ) ಮಾನದಂಡವನ್ನು ಅನುಸರಿಸುವಂತೆ ಆದೇಶಿಸಿರುತ್ತದೆ. ದಿನಾಂಕ:05.09.2024 ರ ತೀರ್ಪಿನ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:1578/2024ನ್ನು ಸಲ್ಲಿಸಲಾಗಿರುತ್ತದೆ.</td></tr>
<tr><td>ಇ)</td><td>ಒಂದು ವೇಳೆ ಯುಜಿಸಿ ಮಾನದಂಡಗಳನ್ನು ಪಾಲಿಸಬೇಕಿದ್ದಲ್ಲಿ ಭಾದಿತರಾಗುವ ಹಿರಿಯ ಅತಿಥಿ ಉಪನ್ಯಾಸಕರ ಹಿತಕಾಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ; (ವಿವರ ನೀಡುವುದು)</td></tr>
</table>

| | | |
|---|---|---|
| ಈ) | ಅತಿಥಿ ಉಪನ್ಯಾಸಕರನ್ನು ಯುಜಿಸಿ ಮಾನದಂಡಗಳ ಪ್ರಕಾರ ನೇಮಿಸಿಕೊಳ್ಳುವಾಗ ಕೆಲವು ವಿಷಯಗಳಲ್ಲಿ ಬೋಧಕರ ಕೊರತೆಯುಂಟಾದಲ್ಲಿ ಕೊರತೆಯಾಗುವ ಬೋಧಕರನ್ನು ಯಾವ ರೀತಿ ಸರಿದೂಗಿಸಿ ಕೊಳ್ಳಲಾಗುವುದು? (ವಿವರ ನೀಡುವುದು) | 2024-25ನೇ ಸಾಲಿಗೆ ಅತಿಥಿ ಉಪನ್ಯಾಸಕರ ಆಯ್ಕೆಗೆ ಈಗಾಗಲೇ ಅರ್ಜಿಗಳನ್ನು ಆಹ್ವಾನಿಸಿದ್ದು ಒಟ್ಟು 34509 ಅರ್ಜಿಗಳು ಸ್ವೀಕೃತಗೊಂಡಿರುತ್ತವೆ.<br><br>ಅತಿಥಿ ಉಪನ್ಯಾಸಕರನ್ನು ನೇಮಿಸಬೇಕಿರುವ ಒಟ್ಟು 40 ವಿಷಯಗಳ ಪೈಕಿ 30 ವಿಷಯಗಳಿಗೆ ಅವಶ್ಯವಿರುವ ಸಂಖ್ಯೆಯ ಅಭ್ಯರ್ಥಿಗಳು ಯು.ಜಿ.ಸಿ. ನಿಗದಿತ ಅರ್ಹತಾ ಮಾನಂಡಗಳನ್ನು ಹೊಂದಿರುತ್ತಾರೆ.<br><br>ಉಳಿದ 10 ವಿಷಯಗಳಿಗೆ ಒಟ್ಟು 1370 ಅಭ್ಯರ್ಥಿಗಳು ಯು.ಜಿ.ಸಿ. ನಿಗದಿತ ಅರ್ಹತಾ ಮಾನಂಡಗಳನ್ನು ಹೊಂದಿರುವ ಅಭ್ಯರ್ಥಿಗಳ ಕೊರತೆ ಇರುತ್ತದೆ. ಅದರಂತೆ, ಯುಜಿಸಿ ನಿಗದಿತ ಅರ್ಹತಾ ಮಾನಂಡಗಳನ್ನು ಹೊಂದಿರುವ ಅಭ್ಯರ್ಥಿಗಳ ಕೊರತೆ ಇರುವ 10 ವಿಷಯಗಳಿಗೆ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಾಗುವವರೆಗೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸ್ನಾತಕೋತ್ತರ ಪದವಿಯ PG ಅರ್ಹತೆ ಹೊಂದಿರುವ ಅಭ್ಯರ್ಥಿಗಳನ್ನೇ ಅತಿಥಿ ಉಪನ್ಯಾಸಕರನ್ನಾಗಿ ನೇಮಿಸಿಕೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ:ಇಡಿ 383 ಡಿಸಿಇ 2024 (ಇ)**

(ಡಾ ಎಂ. ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು,